**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಕೆ.ಆರ್.ವೃತ್ತ, ಬೆಂಗಳೂರು– 01**

ಸಂಖ್ಯೆ ಎಂಸಿ4ಮಅಸಂಘೋಷಣೆ34/2010–11 ದಿನಾಂಕ:29/06/2011

**ಜ್ಞಾಪನಾ**

ವಿಷಯ:–ಕರ್ನಾಟಕ ರಾಜ್ಯದಲ್ಲಿ ಭಾಷಾ ಅಲ್ಪಸಂಖ್ಯಾತರುಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಭಾಷಾ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಿಸುವ ಬಗ್ಗೆ.

ಉಲ್ಲೇಖ:– 1) ಸರ್ಕಾರದ ಸುತ್ತೋಲೆ ಸಂಖ್ಯೆ ಇಡಿ 5 ಎಸ್ ಎಂ ಸಿ 2002 ದಿನಾಂಕ20–07–2004
2) ಸರ್ಕಾರದ ತಿದ್ದೋಲೆ ಸಂಖ್ಯೆ ಇಡಿ 22ಎಂಪಿಎಸ್ 2005 ದಿನಾಂಕ 12–12–2006
3) ಸರ್ಕಾರದ ಅಧಿಸೂಚನೆ ಸಂಖ್ಯೆ61 ಎಸ್ಎಂಸಿ2009 ದಿನಾಂಕ:03/09/2010
4) ಸರ್ಕಾರದ ತಿದ್ದೋಲೆ ಸಂಖ್ಯೆ ಇಡಿ 39ಎಸ್ಎಂಸಿ 2010 ದಿನಾಂಕ 01/10/2010
6)ಉಪನಿರ್ದೇಶಕರಿಂದ ಬಂದ ಪ್ರಸ್ತಾವನೆಗಳು

--000--

**ಪ್ರಸ್ತಾವನೆ :–**

ಮೇಲಿನ ಉಲ್ಲೇಖ(1)ರಿಂದ(3)ರವರೆಗಿನ ಸರ್ಕಾರಿ ಅಧಿಸೂಚನೆಗಳಲ್ಲಿ ಭಾಷಾ ಅಲ್ಪಸಂಖ್ಯಾತರ ಆಡಳಿತ ಮಂಡಳಿಯವರು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳನ್ನು ಭಾಷಾ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಿಸುವ ಬಗ್ಗೆ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯು ದಿನಾಂಕ: 28/06/2011ರಂದು ಪರಿಶೀಲನಾ ಸಮಿತಿ ಸಭೆ ಸೇರಿ ಕೆಳಕಂಡ ಶಿಕ್ಷಣ ಸಂಸ್ಥೆಗಳ ದಾಖಲೆಗಳನ್ನು ಕೂಲಂಕಶವಾಗಿ ಪರಿಶೀಲಿಸಿ, ಭಾಷಾ ಅಲ್ಪಸಂಖ್ಯಾತರು ನಡೆಸುತ್ತಿರುವ ಕೆಳಕಂಡ ಶಾಲೆಗಳನ್ನು ಭಾಷಾ ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸುವ ಬಗ್ಗೆ ಕೆಲವೊಂದು ಷರತ್ತುಗಳನ್ನು ಅನ್ವಯಿಸಿ, ಸದರಿ ಷರತ್ತುಗಳನ್ನು ಪೂರೈಸಿರುವಂತಹ ಶಾಲೆಗಳನ್ನು ಭಾಷಾ ಅಲ್ಪಸಂಖ್ಯಾತರ ಶಾಲೆಗಳೆಂದು ಘೋಷಿಸಲು ಸಮಿತಿಯು ತೀರ್ಮಾನಿಸಿ ಸಮ್ಮತಿಸಲಾಗಿದೆ.

**ಆದೇಶ :–**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ ಭಾಷಾ ಅಲ್ಪಸಂಖ್ಯಾತರು ನಡೆಸುತ್ತಿರುವ ಶಾಲೆಗಳನ್ನು ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭಾಷಾ ಅಲ್ಪಸಂಖ್ಯಾತ ಶಾಲೆಗಳೆಂದು ಘೋಷಿಸಿ ಆದೇಶಿಸಿದೆ. ಕಾಲಾನುಕಾಲಕ್ಕೆ ಮಾನ್ಯತೆಯನ್ನು ನವೀಕರಿಸುವ ಸಮಯದಲ್ಲಿ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಘೋಷಣೆ ಮಾಡಲಾದ ಭಾಷಾ ಅಲ್ಪಸಂಖ್ಯಾತ ಸ್ಥಾನಮಾನವನ್ನು ಹಿಂತೆಗೆದುಕೊಳ್ಳಲಾಗುವುದು.

| ಕ್ರಮ ಸಂಖ್ಯೆ | ಶಿಕ್ಷಣ ಸಂಸ್ಥೆಯ ಹೆಸರು | ಭಾಷೆ | ಶಾಲೆಯ ಹೆಸರು ಮತ್ತು ವಿಳಾಸ |
|---|---|---|---|
| 1 | ಜಿ.ಎಸ್.ವಿ.ಎಸ್.ಸಂಘ, ಗಂಗೊಳ್ಳಿ, ಕುಂದಾಪುರ ತಾ.. ಉಡುಪಿ ಜಿಲ್ಲೆ. | ಕೊಂಕಣಿ | ಎಸ್.ವಿ.ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆ, ಗಂಗೊಳ್ಳಿ–576216, ಕುಂದಾಪುರ ತಾ.. ಉಡುಪಿ ಜಿಲ್ಲೆ |
| 2 | ಜಿ.ಎಸ್.ವಿ.ಎಸ್.ಸಂಘ, ಗಂಗೊಳ್ಳಿ, ಕುಂದಾಪುರ ತಾ.. ಉಡುಪಿ ಜಿಲ್ಲೆ. | ಕೊಂಕಣಿ | ಎಸ್.ವಿ. ಆಂಗ್ಲ ಮಾಧ್ಯಮ ಪ್ರೌಢಶಾಲೆ, ಗಂಗೊಳ್ಳಿ–576216, ಕುಂದಾಪುರ ತಾ.. ಉಡುಪಿ ಜಿಲ್ಲೆ. |

**ಷರತ್ತುಗಳು**

1)ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ಕಡ್ಡಾಯವಾಗಿ ಮೀಸಲಾತಿ ನಿಯಮಗಳನ್ನು ಪಾಲಿಸಿರಬೇಕು. (ರೋಸ್ಟ್ರ ಪದ್ದತಿ ಪಾಲಿಸಿರಬೇಕು)

2)ಶಾಲೆಗಳನ್ನು ನಡೆಸುವ ಆಡಳಿತ ಮಂಡಳಿಯು ಟ್ರಸ್ಟ್/ಸೊಸೈಟಿ ನೊಂದಣಿ ಕಾಯ್ದೆ ಪ್ರಕಾರ ನೊಂದಣಿಯಾಗಿರಬೇಕು. ಹಾಗೂ ಕಾಲಕಾಲಕ್ಕೆ ನವೀಕರಿಸಿರಬೇಕು.

3) ಶಾಲೆಗಳ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದು, ಆಯಾಯ ಭಾಷಾ ಅಲ್ಪಸಂಖ್ಯಾತರ ಸಂಖ್ಯೆ ಕನಿಷ್ಟ ಮೂರನೆ ಎರಡರಷ್ಟಿರಬೇಕು.

4) ಶಾಲೆಗಳನ್ನು ನಡೆಸುವ ಭಾಷಾ ಅಲ್ಪಸಂಖ್ಯಾತ ಆಡಳಿತ ಮಂಡಳಿಯ ಸದಸ್ಯರು ಕಾರ್ಯಕಾರಿ ಸಮಿತಿಯಲ್ಲಿದ್ದರೆ ಅಂತಹ ಸದಸ್ಯರು ಸಂಬಂಧಿಸಿದ ತಹಶೀಲ್ದಾರರಿಂದ ಭಾಷಾ ಪ್ರಮಾಣ ಪತ್ರವನ್ನು ಪಡೆದಿರಬೇಕು.

5) ಮತೀಯ ಅಲ್ಪಸಂಖ್ಯಾತರು ನಡೆಸುತ್ತಿರುವ ಪ್ರಾಥಮಿಕ/ಪ್ರೌಢಶಾಲೆಗಳನ್ನು ನಡೆಸಲು ಕರ್ನಾಟಕ ಶಿಕ್ಷಣ ಕಾಯ್ದೆಯಡಿಯಲ್ಲಿ ಇಲಾಖೆಯಿಂದ ನೊಂದಾಯಿಸಿರಬೇಕು, ಮತ್ತು ಕಾಲಕಾಲಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಿರಬೇಕು. ಹಾಗೂ ಇತ್ತೀಚಿನ ಮಾನ್ಯತೆ ನವೀಕರಣ ಪತ್ರ ಹೊಂದಿರತಕ್ಕದ್ದು.

6) ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಂಸ್ಥೆಗಳೆಂದು ಘೋಷಿಸುವ ಸಂಬಂಧ, ಆಯಾಯ ಭಾಷಾ ಅಲ್ಪಸಂಖ್ಯಾತ ಶಿಕ್ಷಣ ಸಂಸ್ಥೆಗಳು ನಡೆಸುತ್ತಿರುವ ಪ್ರದೇಶದಲ್ಲಿ ವಾಸಿಸುತ್ತಿರುವ ಆಯಾಯ ಅಲ್ಪಸಂಖ್ಯಾತ ಸಮುದಾಯದ ಜನಗಣತಿಗೆ ತಕ್ಕಂತೆ, ಆಯಾಯ ಅಲ್ಪಸಂಖ್ಯಾತ ವರ್ಗದ ವಿದ್ಯಾರ್ಥಿಗಳ ಹಿತದೃಷ್ಟಿಯನ್ನು ಕಾಪಾಡಿಕೊಳ್ಳಲು ಆಯಾಯ ವರ್ಗದ ಅಲ್ಪಸಂಖ್ಯಾತ ವರ್ಗದ ವಿದ್ಯಾರ್ಥಿಗಳನ್ನು ಕನಿಷ್ಟ ಅದೇ ಪ್ರಮಾಣದಲ್ಲಿ ದಾಖಲು ಮಾಡಿಕೊಳ್ಳತಕ್ಕದ್ದು.

7)ಸಂಸ್ಥೆಯವರು ಶಾಲೆಗಳಲ್ಲಿ ವಿದ್ಯಾರ್ಹತೆಯುಳ್ಳ ಶಿಕ್ಷಕರನ್ನು ನೇಮಕಾತಿ ಮಾಡಿಕೊಂಡಿರಬೇಕು.

8) ಶಾಲೆಗಳನ್ನು ನಡೆಸುತ್ತಿರುವ ಆಡಳಿತ ಮಂಡಳಿಯು ಆಯಾ ಭಾಷಾ ಅಲ್ಪಸಂಖ್ಯಾತ ರೆಂದು ಖಚಿತ ಪಡಿಸಿಕೊಳ್ಳತಕ್ಕದ್ದು.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು
27/6/11 29/6

ಪ್ರತಿಯನ್ನು

1. ಸರ್ಕಾರದ ಕಾರ್ಯದರ್ಶಿಗಳು, (ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ)ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ನಿರ್ದೇಶಕರು, ಪ್ರಾಥಮಿಕ ಶಿಕ್ಷಣ ಮತ್ತು ಪ್ರೌಢಶಿಕ್ಷಣ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
3. ಉಪನಿರ್ದೇಶಕರು, (ಆಡಳಿತ),ಸಾರ್ವಜನಿಕ ಶಿಕ್ಷಣ ಇಲಾಖೆ, ಉಡುಪಿಜಿಲ್ಲೆ, ಇವರಿಗೆ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಕುಂದಾಪುರ, ಉಡುಪಿ ಜಿಲ್ಲೆ ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
5. ಸಂಬಂಧಿಸಿದ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು/ಕಾರ್ಯದರ್ಶಿಗಳಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
6. ಸಂಬಂಧಿಸಿದ ಶಾಲಾ ಮುಖ್ಯ ಶಿಕ್ಷಕರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.